# ದಿನಾಂಕ: 13-06-2011ರಂದು ಪೂರ್ವಾಹ್ನ: 11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀ ಎಂ.ಕೆ.ದ್ಯಾವಯ್ಯ

ಅಧ್ಯಕ್ಷರು

ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ :05

ಗೈರು ಹಾಜರಿ:02

<table>
<tr><th>ಕ್ರಸಂ</th><th>ವಿಷಯ</th><th>ಚರ್ಚೆ</th><th>ತೀರ್ಮಾನ</th></tr>
<tr><td></td><td></td><td>ಉಪ ಕಾರ್ಯದರ್ಶಿ(ಆಡಳಿತ) ರವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಅಧ್ಯಕ್ಷರನ್ನು ಕೋರಿದರು.</td><td></td></tr>
<tr><td>1</td><td>2011-12ನೇ ಸಾಲಿಗೆ ನಿಗದಿಯಾದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ವ್ಯಾಪ್ತಿಗೊಳಪಡುವ ಇಲಾಖೆಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.</td><td>ಟಿಪ್ಪಣಿ ಸಂಖ್ಯೆ: ಜಿಪಂಹಾಯೋವಿ(3)ಸಾ.ನ್ಯಾ.ಸ್ಥಾ.ಸ/ಕ್ರಿಯೋ/47/2010-11 ದಿನಾಂಕ: 06-06-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br><br>1. <u>ಸಮಾಜ ಕಲ್ಯಾಣ ಇಲಾಖೆ:</u><br><br>ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಯವರು ಮಾತನಾಡುತ್ತಾ, 2011-12ನೇ ಸಾಲಿಗೆ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಬಗ್ಗೆ ಕೆಳಕಂಡಂತೆ ವಿವರಗಳನ್ನು ನೀಡಿದರು.
<table>
<tr><th>ಕ್ರಸಂ</th><th>ಲೆಕ್ಕಶೀರ್ಷಿಕೆ/ ಯೋಜನೆಯ ವಿವರ</th><th>ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>2225-00-101-0-30<br>ಕಾರ್ಯನಿರ್ವಾಹಕ ಸಿಬ್ಬಂದಿ</td><td>28.190</td></tr>
<tr><td>2</td><td>2225-00-101-0-29<br>ಮೆ.ನಂತರದ ಸರ್ಕಾರಿ ವಿದ್ಯಾರ್ಥಿನಿಲಯಗಳ ಹಾಗೂ ಕಟ್ಟಡಗಳ ನಿರ್ವಹಣೆ</td><td>181.730</td></tr>
<tr><td>3</td><td>2225-00-101-0-37<br>ಶ್ರೇಷ್ಠತೆ ಪಡೆದ ಪ.ಜಾತಿ ವಿದ್ಯಾರ್ಥಿಗಳಿಗೆ ಸಹಾಯಧನ</td><td>48.00</td></tr>
<tr><td>4</td><td>2225-00-101-0-06<br>ವೈದ್ಯಕೀಯ/ ತಾಂತ್ರಿಕ ಕಾಲೇಜು ಗಳಿಗೆ ಪುಸ್ತಕ ಭಂಡಾರ (ರಾಜ್ಯ 5.00 + ಕೇಂದ್ರ 5.00)</td><td>10.00</td></tr>
<tr><td>5</td><td>2225-00-102-0-38<br>ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಮೆ.ನಂತರದ ವಿದ್ಯಾರ್ಥಿ ವೇತನ</td><td>5.00</td></tr>
</table></td><td>ಸಭೆಯಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ವ್ಯಾಪ್ತಿಗೊಳ ಪಡುವ ಇಲಾಖೆಗಳ 2011-12ನೇ ಸಾಲಿನ ಕ್ರಿಯಾ ಯೋಜನೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.<br><br>2011-12ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆ ಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿ ರುವ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ನಿರ್ಣಯಿಸ ಲಾಯಿತು.</td></tr>
</table>

| | | |
|---|---|---|
| 6 | 2225-00-102-0-08<br>ಪ.ವರ್ಗದ ವಿದ್ಯಾರ್ಥಿಗಳಿಗೆ ವೈದ್ಯಕೀಯ/ ತಾಂತ್ರಿಕ ಕಾಲೇಜುಗಳಲ್ಲಿ ಪುಸ್ತಕ ಭಂಡಾರ ಸ್ಥಾಪನೆ (ರಾಜ್ಯ 2.50 + ಕೇಂದ್ರ 2.50) | 5.00 |
| 7 | 2225-00-102-0-33<br>ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳ ನಿರ್ವಹಣೆ | 29.530 |
| | ಒಟ್ಟು | 307.450 |

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳು, ಆಶ್ರಮಶಾಲೆಗಳು, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಬಗ್ಗೆ ಮತ್ತು ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಸಂಸ್ಥೆಗಳ ಬಗ್ಗೆ ತಾಲ್ಲೂಕುವಾರು ವಿವರಗಳನ್ನು ಸಮಿತಿ ಸದಸ್ಯರುಗಳಿಗೆ ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.

ಉಪ ಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಶೇ.25ರಷ್ಟು ಅನುದಾನವನ್ನು ಪರಿಶಿಷ್ಟ ಜಾತಿ/ವರ್ಗದ ಜನಾಂಗದವರಿಗೆ ಕಡ್ಡಾಯವಾಗಿ ವಿನಿಯೋಗಿಸುತ್ತಿರುವ ಬಗ್ಗೆ ಸ್ಥಾಯಿ ಸಮಿತಿ ಸದಸ್ಯರೊಂದಿಗೆ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.

ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ನಿಯಮಾನುಸಾರ ಅನುಷ್ಠಾನ ಮಾಡಲಾಗುತ್ತಿದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಕೆರಗೋಡು ಗ್ರಾಮದಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರಿಗೆ ತಿಳಿಸಿದರು.

ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಮಾತನಾಡುತ್ತಾ, ಕೆರಗೋಡು ಗ್ರಾಮದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಸುಮಾರು ರೂ.83.00ಲಕ್ಷಗಳಿಗೆ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಲಾಗಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರೂ ಸಹ ಸಂಬಂಧಪಟ್ಟ ಇಲಾಖೆಯವರಿಗೆ ಅನುದಾನವನ್ನು ಬಿಡುಗಡೆ ಮಾಡುವಂತೆ ಪತ್ರ ಬರೆದಿದ್ದಾರೆ. ಇಲಾಖೆಗಳಿಂದ ಅನುದಾನ ಬಿಡುಗಡೆಯಾದಲ್ಲಿ ಕಾಮಗಾರಿಗಳನ್ನು ಪ್ರಾರಂಭ ಮಾಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ 5 ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯನ್ನು ಮತ್ತು 6 ಫಲಾನುಭವಿಗಳಿಗೆ ಹೈನುಗಾರಿಕೆಗೆ ಸಂಬಂಧಿಸಿದಂತೆ, ಪ್ರಸ್ತಾವನೆಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲಾಗಿದ್ದು, ಹೈನುಗಾರಿಕೆಗೆ ಅನುಮೋದನೆ ದೊರೆತಿದ್ದು, ಗಂಗಾ ಕಲ್ಯಾಣ ಯೋಜನೆಗೆ ಅನುಮತಿ ಸಿಕ್ಕಿರುವುದಿಲ್ಲವೆಂದು ಸಭೆಗೆ ಮಾಹಿತಿ ನೀಡಿದರು. ಅಲ್ಲದೆ, ದೌರ್ಜನ್ಯ ಪ್ರಕರಣಗಳಿಗೆ ಸರ್ಕಾರದಿಂದ ವಿಶೇಷ ಅನುದಾನ ಬಿಡುಗಡೆ ಮಾಡಿದಲ್ಲಿ ಮಾತ್ರ ಅನುಷ್ಠಾನ ಮಾಡಬೇಕೆಂದು ಕೇಂದ್ರ ಕಛೇರಿಯ ಬೋರ್ಡ್ ಮೀಟಿಂಗ್‌ನಲ್ಲಿ ನಿರ್ದೇಶನ ನೀಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

**2. ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ:**

ಜಿಲ್ಲಾ ಅಧಿಕಾರಿಯವರು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಸಮಿತಿಗೆ ಈ ಕೆಳಕಂಡಂತೆ ನೀಡಿದರು.

| ಕ್ರಸಂ | ಲೆಕ್ಕಶೀರ್ಷಿಕೆ/ ಯೋಜನೆಯ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2225-00-103-0-26 ವಿದ್ಯಾರ್ಥಿನಿಲಯಗಳ ನಿರ್ವಹಣೆ | 440.03 |
| 2 | 2225-00-103-0-53 ಥೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ ಮತ್ತು ಹೊಸ ಕೇಂದ್ರಗಳ ಪ್ರಾರಂಭ | 2.40 |
| 3 | | |
| 4 | 2225-00-103-0-40 ಕಟ್ಟಡಗಳ ವೆಚ್ಚ ಮತ್ತು ನಿರ್ವಹಣೆ | 25.00 |
| | ಒಟ್ಟು | 467.43 |
| | **ಅಲ್ಪಸಂಖ್ಯಾತರ ಇಲಾಖೆ** | |
| 1 | 2225-00-103-0-34 ಅಲ್ಪಸಂಖ್ಯಾತರ ಹಾಸ್ಟೆಲ್ ಗಳು | 57.00 |
| 2 | 2225-00-103-0-44 ಅಲ್ಪಸಂಖ್ಯಾತರಿಗಾಗಿ ತರಬೇತಿ ಮತ್ತು ಕಾನೂನು ಪದವೀಧರರಿಗೆ ಶಿಷ್ಯವೇತನ | 5.74 |
| 3 | 2225-00-103-0-54 ಅಲ್ಪಸಂಖ್ಯಾತರಿಗಾಗಿ ವೃತ್ತಿಪರ ತರಬೇತಿ | 0.85 |

ಕಾನೂನು ಪದವೀಧರರಿಗೆ ಶಿಷ್ಯವೇತನ ಕಾರ್ಯಕ್ರಮದ ಮಂಜೂರಾತಿ ಪಡೆಯಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ವಿದ್ಯಾರ್ಥಿನಿಲಯಗಳ ದುರಸ್ಥಿಗೆ ಸಂಬಂಧಿಸಿದಂತೆ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯವರು ಅಗತ್ಯ ಕ್ರಮ ಕೈಗೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು.

ಅರಕಲಗೂಡು ತಾಲ್ಲೂಕಿನ ಗಂಗೂರು ವಿದ್ಯಾರ್ಥಿನಿಲಯ ಕಟ್ಟಡ ಶಿಥಿಲಗೊಂಡಿರುವುದನ್ನು ಕೂಡಲೇ ದುರಸ್ಥಿ ಪಡಿಸಲು ಕ್ರಮ ವಹಿಸಲು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯ ಪಟ್ಟಣ ಮತ್ತು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಯವರಿಗೆ ಸೂಚಿಸಲಾಯಿತು.

2011-12ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಪುಸ್ತಕದಲ್ಲಿನಿಗದಿಪಡಿಸಿರುವ ಅನುದಾನದ

| | ಒಟ್ಟು | 63.59 |
|---|---|---|

ಕಾನೂನು ಪದವೀಧರರಿಗೆ ಶಿಷ್ಯವೇತನ ಕಾರ್ಯಕ್ರಮದಲ್ಲಿ ಯಾವ ಜಿಲ್ಲೆಗೂ ಅನುದಾನವನ್ನು ನಿಗದಿಪಡಿಸಿರುವುದಿಲ್ಲ. ಈ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಗೆ ಸರ್ಕಾರದಿಂದ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ ಎಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಸಭೆಗೆ ಮಾಹಿತಿ ನೀಡಿದರು.

ಕಟ್ಟಡಗಳ ದುರಸ್ಥಿಗೆ ಸಂಬಂಧಿಸಿದಂತೆ, ಅನುದಾನವನ್ನು ನಿಗದಿತ ಅವಧಿಯೊಳಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ನೀಡಿದ್ದರೂ ಸಹ ದುರಸ್ಥಿ ಕಾಮಗಾರಿಗಳನ್ನು ಅನುಷ್ಠಾನ ಮಾಡದೆ ಅನುದಾನವನ್ನು ವ್ಯಪಗತ ಮಾಡಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಸಹಾಯಕ ಅಭಿಯಂತರರು/ಕಿರಿಯ ಅಭಿಯಂತರರುಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.

ಹಾಸನ ನಗರಸಭೆಯಿಂದ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯ ನೀಡಲು ಅನುದಾನ ನೀಡಲಾಗುತ್ತಿದ್ದು, ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಶೇ.25ರಷ್ಟು ವಿದ್ಯಾರ್ಥಿಗಳನ್ನು ಪರಿಶಿಷ್ಟ ಜಾತಿ/ವರ್ಗಗಳ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಿಗೂ ಸಹ ವಿದ್ಯಾರ್ಥಿಗಳಿಗನುಗುಣವಾಗಿ ಮೂಲಭೂತ ಸೌಲಭ್ಯವನ್ನು ಒದಗಿಸುವಂತೆ ನಗರಸಭೆಗೆ ನಿರ್ದೇಶನ ನೀಡಬೆಕೆಂದು ಕೋರಿದರು.

ಮುಂದುವರೆದು, ಅರಕಲಗೂಡು ತಾಲ್ಲೂಕು ರಾಮನಾಥಪುರ ಹೋ: ಗಂಗೂರು ಗ್ರಾಮದಲ್ಲಿರುವ ಇಲಾಖೆಯ ವಿದ್ಯಾರ್ಥಿನಿಲಯದ ಕಟ್ಟಡ ತುಂಬಾ ಶಿಥಿಲಗೊಂಡಿದ್ದು, ಬೀಳುವ ಸ್ಥಿತಿಯಲ್ಲಿದೆ. ಆದ್ದರಿಂದ, ಪ್ರಸಕ್ತ ಸಾಲಿನಲ್ಲಿ ಕಟ್ಟಡಗಳ ದುರಸ್ಥಿ ಯೋಜನೆಯಡಿಯಲ್ಲಿ ನಿಗದಿಪಡಿಸಿರುವ ಅನುದಾನದಲ್ಲಿ ಗಂಗೂರು ಗ್ರಾಮದ ವಿದ್ಯಾರ್ಥಿನಿಲಯದ ಕಟ್ಟಡದ ದುರಸ್ಥಿಗೆ ವಿಶೇಷ ಪ್ರಕರಣವೆಂದು ಪರಿಗಣಿಸಿ ಅಗತ್ಯ ಅನುದಾನವನ್ನು ನೀಡಬೇಕೆಂದು ಮತ್ತು ತಕ್ಷಣವೇ ಕಾಮಗಾರಿಯನ್ನು ಪ್ರಾರಂಭಿಸಲು ಅನುಮತಿ ನೀಡಬೇಕೆಂದು ಕೋರಿದರು.

ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು.

### 3. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:

ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು 2011–12ನೇ ಸಾಲಿಗೆ ಲಿಂಕ್ ಮುಸ್ತಕದಲ್ಲಿ ಇಲಾಖೆಯ ವಿವಿಧ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ವಿವರಗಳನ್ನು ಸಭೆಗೆ ನೀಡಿದರು.

| ಕ್ರಸಂ | ಲೆಕ್ಕಶೀರ್ಷಿಕೆ/ ಯೋಜನೆಯ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | 2211–00–102–0–29<br>ನಿರ್ಗತಿಕ ಅನಾಥ ಮಕ್ಕಳ ಕುಟೀರಗಳು | 2.40 |
| 2 | 2211–00–102–0–26<br>ಅಂಗನವಾಡಿ ಕಾರ್ಯಕರ್ತೆ ಸಹಾಯಕಿಯರ ಹೆಚ್ಚವರಿ | 411.96 |

2011–12ನೇ ಸಾಲಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳಿಗೆ ಲಿಂಕ್ ಮುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ನಿರ್ಣಯಿಸ ಲಾಯಿತು.

| | | |
|---|---|---|
| | ಗೌರವಧನ | |
| 3 | 2211-00-102-0-02<br>ಐ.ಸಿ.ಡಿ.ಎಸ್. ಘಟಕ | 25.00 |
| 4 | 2235-02-101-0-28<br>ಅಂಗವಿಕಲರಿಗಾಗಿ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು | 17.00 |
| | **ಒಟ್ಟು** | **456.36** |

ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಮಾತನಾಡುತ್ತಾ,ಜಿಲ್ಲೆಯಲ್ಲಿ ಒಟ್ಟು 2472 ಅಂಗನವಾಡಿ ಕೇಂದ್ರಗಳಿದ್ದು, ಅವುಗಳಲ್ಲಿ 1530ಕ್ಕೆ ಸ್ವಂತ ಕಟ್ಟಡಗಳಿವೆ. 1479 ಅಂಗನವಾಡಿ ಕೇಂದ್ರಗಳಲ್ಲಿ ಅಡುಗೆ ಕೋಣೆಗಳಿವೆ. 1006 ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯ ವ್ಯವಸ್ಥೆ ಇದ್ದು, ಸ್ವಂತ ಕಟ್ಟಡ ಹೊಂದಿರುವ ಅಂಗನವಾಡಿ ಕೇಂದ್ರಗಳಿಗೆ ಶೌಚಾಲಯ ವ್ಯವಸ್ಥೆಯನ್ನು ಒದಗಿಸಬೇಕೆಂದು ಕೋರಿದರು.

ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳ ಗ್ರಾಮವಾರು ಹಾಗೂ ತಾಲ್ಲೂಕುವಾರು ಪಟ್ಟಿಗಳನ್ನು ತಯಾರಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯವರಿಗೆ ಸಲ್ಲಿಸಲು ಸೂಚಿಸಲಾಯಿತು ಹಾಗೂ ಸ್ವಂತ ಕಟ್ಟಡವಿದ್ದು, ಶೌಚಾಲಯ ವ್ಯವಸ್ಥೆ ಇಲ್ಲದ ಕೇಂದ್ರಗಳ ಪಟ್ಟಿಯನ್ನು ನೀಡಿದಲ್ಲಿ ಸಂಪೂರ್ಣ ಸ್ವಚ್ಛತಾ ಆಂದೋಲನ ಯೋಜನೆಯಡಿ ನಿರ್ಮಿಸಿ ಕೊಡಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ಚರ್ಚಿಸಿ ಇಲಾಖಾಧಿಕಾರಿ ಗಳಿಗೆ ಸೂಚಿಸಿ ನಿರ್ಣಯಿಸಲಾಯಿತು.

### 4. <u>ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ:</u>

ಎಲ್ಲಾ ಯೋಜನೆಗಳಿಗೆ ಅರ್ಜಿಗಳನ್ನು ವಿತರಣೆ ಮಾಡಲಾಗಿದೆ. ಮಾನ್ಯ ಶಾಸಕರುಗಳ ಅಧ್ಯಕ್ಷತೆಯಲ್ಲಿ ಫಲಾನುಭವಿಗಳ ಆಯ್ಕೆ ಮಾಡಲಾಗುತ್ತದೆ. ವಾರ್ಷಿಕ ಗುರಿಯನ್ನು ಕೇಂದ್ರ ಕಛೇರಿಯಿಂದ ನಿಗದಿಪಡಿಸಿರುವುದಿಲ್ಲವೆಂದು ಜಿಲ್ಲಾ ವ್ಯವಸ್ಥಾಪಕರು ಸಭೆಗೆ ಮಾಹಿತಿ ನೀಡಿದರು.

ಉಪ ಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಸಾರಾಯಿ ನಿಷೇಧದಿಂದ ಹಾನಿಗೊಳಗಾದವರಿಗೆ ಪುನರ್ವಸತಿಗೊಳಿಸಲು ಸರ್ಕಾರದಿಂದ ನಿರ್ದೇಶನದ ಮೇರೆಗೆ ಕ್ರಮ ವಹಿಸುವಂತೆ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಹಾಸನ ಇವರಿಗೆ ತಿಳಿಸಿದರು.

ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಹಾಸನ ಇವರು ಮಾತನಾಡುತ್ತಾ, ನೌಕರನಾಮ ಇಲ್ಲದೇ ಪುನರ್ವಸತಿ ಯೋಜನೆಯಡಿಯಲ್ಲಿ ಸೇರಿಸಲು ಸಾಧ್ಯವಾಗುತ್ತಿಲ್ಲವೆಂದು ಸಭೆಗೆ ವಿವರ ನೀಡಿದರು.

ಸಾರಾಯಿ ಗುತ್ತಿಗೆದಾರರ ಹತ್ತಿರ ಕೆಲಸ ನಿರ್ವಹಿಸಿರುವ ಬಗ್ಗೆ ಗುತ್ತಿಗೆದಾರರಿಂದ ಅಧಿಕೃತ ಪತ್ರವನ್ನು ಪಡೆದಂತಹವರನ್ನು ಸಹ ಪರಿಗಣಿಸಬೇಕೆಂದು ಜಿಲ್ಲಾ ವ್ಯವಸ್ಥಾಪರಿಗೆ ತಿಳಿಸಲಾಯಿತು.

| | | |
|---|---|---|
| | **5. ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮ:**<br>2011-12ನೇ ಸಾಲಿಗೆ ನಿಗಮದಿಂದ ಎಲ್ಲಾ ಯೋಜನೆಗಳಿಗೆ ಅರ್ಜಿಗಳನ್ನು ವಿತರಣೆ ಮಾಡಲಾಗಿದೆ. ಮಾನ್ಯ ಶಾಸಕರುಗಳ ಅಧ್ಯಕ್ಷತೆಯಲ್ಲಿ ಫಲಾನುಭವಿಗಳ ಆಯ್ಕೆ ಮಾಡಲಾಗುತ್ತದೆ. ವಾರ್ಷಿಕ ಗುರಿಯನ್ನು ಕೇಂದ್ರ ಕಛೇರಿಯಿಂದ ನಿಗದಿಪಡಿಸಿರುವುದಿಲ್ಲವೆಂದು ಜಿಲ್ಲಾ ವ್ಯವಸ್ಥಾಪಕರು ಸಭೆಗೆ ಮಾಹಿತಿ ನೀಡಿದರು. | |
| ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು | | |
| 1. ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ನಿರ್ಗತಿಕ ಮಕ್ಕಳ ಕುಟೀರಕ್ಕೆ 2011-12ನೇ ಸಾಲಿನಲ್ಲಿ ಮಂಜೂರಾತಿ ನೀಡುವ ಬಗ್ಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(8)ಕಬಾನಿ246/2010-11 ದಿನಾಂಕ: 12-04-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಸ್ನೇಹಾಲಯ ಅಕ್ಸೀಲಿಯಂ ಸೊಸೈಟಿ, ಜೋಸೆಫ್ ನಗರ, ಗುಡ್ಡೇನಹಳ್ಳಿ ಅಂಚೆ, ಆಲೂರು ತಾ: ಇವರ ವತಿಯಿಂದ 2010-11ನೇ ಸಾಲಿನಿಂದ ನಿರ್ಗತಿಕ ಮಕ್ಕಳ ಕುಟೀರನ್ನು ನಡೆಸುತ್ತಿದ್ದು, ಸದರಿ ಸಂಸ್ಥೆಗೆ ದಿನಾಂಕ: 07-03-2011ರಂದು ಭೇಟಿ ನೀಡಿ ಪರಿಶೀಲಿಸಲಾಗಿದೆ. ಈ ಕುಟೀರದಲ್ಲಿ 80 ಮಕ್ಕಳಿದ್ದು, ಈ ಮಕ್ಕಳ ಪೈಕಿ 50 ಮಕ್ಕಳಿಗೆ ತಹಸೀಲ್ದಾರ್‌ರವರು ನಿರ್ಗತಿಕರು ಎನ್ನುವ ಬಗ್ಗೆ ದೃಢೀಕರಣವನ್ನು ಸಲ್ಲಿಸಿರುತ್ತಾರೆ. ಆದ್ದರಿಂದ, 2011-12ನೇ ಸಾಲಿಗೆ ಅಕ್ಸೀಲಿಯಂ ಸೊಸೈಟಿಯವರು ನಡೆಸುತ್ತಿರುವ ಕುಟೀರದ 50 ಮಕ್ಕಳಿಗೆ ಅನುದಾನ ಲಭ್ಯತೆ ಮೇರೆಗೆ, ಜಿಲ್ಲಾ ಪಂಚಾಯಿತಿ ಸ್ಥಾಯಿ ಸಮಿತಿಯ ಅನುಮೋದನೆ ಪಡೆದು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.<br>ಉಪ ಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಹೊಸದಾಗಿ ಪ್ರಾರಂಭ ಮಾಡುವ ನಿರ್ಗತಿಕ ಕುಟೀರಕ್ಕೆ ಹೊಸದಾಗಿ ಅನುದಾನವನ್ನು ನೀಡಲು ಅವಕಾಶವಿರುವುದಿಲ್ಲ. ಒಂದುವೇಳೆ ಈಗಾಗಲೇ ಪ್ರಾರಂಭವಾಗಿ ಮುಚ್ಚಿಹೋಗಿರುವ ನಿರ್ಗತಿಕ ಕುಟೀರಕ್ಕೆ ನೀಡುತ್ತಿದ್ದ ಅನುದಾನವನ್ನು ವರ್ಗಾವಣೆ ಮಾಡಬಹುದಾಗಿದ್ದು, ಈ ಬಗ್ಗೆ ಪರಿಶೀಲನೆ ನಡೆಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಉಪ ನಿರ್ದೇಶಕರು ಉತ್ತರಿಸುತ್ತಾ, ಹಾಸನ ನಗರದಲ್ಲಿ ಬ್ಲೂ ಮೌಂಟೆನ್ ಎಜುಕೇಷನ್ ಸೊಸೈಟಿಯವರು 50 ಮಕ್ಕಳ ನಿರ್ಗತಿಕ ಕುಟೀರವನ್ನು ನಡೆಸುತ್ತಿದ್ದು, ಸದರಿ ನಿರ್ಗತಿಕ ಕುಟೀರದಲ್ಲಿ ಈಗ 16 ಮಕ್ಕಳು ಇದ್ದು, ಒಂದು ಘಟಕವನ್ನು ಮುಚ್ಚಲಾಗಿದೆ. ಅಲ್ಲದೆ, ಜಮೀನಿನ ಸಂಬಂಧ ದಾವೆಯು ನ್ಯಾಯಾಲಯದಲ್ಲಿರುವುದಾಗಿ ಸಭೆಗೆ ಮಾಹಿತಿ ನೀಡಿದರು.<br>ಉಪ ಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಬ್ಲೂ ಮೌಂಟೆನ್ ಸಂಸ್ಥೆಯು ನಡೆಸುತ್ತಿರುವ ನಿರ್ಗತಿಕ ಕುಟೀರದ ನಿರ್ವಹಣೆ ವಿಷಯವು ಈಗಾಗಲೇ ನ್ಯಾಯಾಲಯದಲ್ಲಿರುವುದರಿಂದ, ನ್ಯಾಯಾಲಯದ ತೀರ್ಪಿನ ನಂತರ ಕ್ರಮ ಕೈಗೊಳ್ಳಬಹುದೆಂದು ತಿಳಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು.<br>ಸರ್ಕಾರದ ಆದೇಶದನ್ವಯ ಹೊಸ ನಿರ್ಗತಿಕ ಕುಟೀರಗಳಿಗೆ ಹೊಸದಾಗಿ ಅನುದಾನ ನೀಡಲು ಅವಕಾಶವಿರುವುದಿಲ್ಲ. ಆದ್ದರಿಂದ, ಸ್ನೇಹಾಲಯ ಅಕ್ಸೀಲಿಯಂ ಸೊಸೈಟಿ, ಜೋಸೆಫ್ ನಗರ, ಗುಡ್ಡೇನಹಳ್ಳಿ ಅಂಚೆ, ಆಲೂರು ತಾ: ಇವರ ವತಿಯಿಂದ 2010-11ನೇ ಸಾಲಿನಿಂದ ನಡೆಸುತ್ತಿರುವ ನಿರ್ಗತಿಕ ಮಕ್ಕಳ ಕುಟೀರಕ್ಕೆ ಅನುದಾನವನ್ನು ನೀಡುವ ಸಂಬಂದಿಸಿದಂತೆ, ವಿಷಯವು ನ್ಯಾಯಾಲಯದಲ್ಲಿರುವುದರಿಂದ, ನ್ಯಾಯಾಲಯದ ತೀರ್ಪಿನ ನಂತರ ಕ್ರಮ ವಹಿಸುವಂತೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಮೆನು ಚಾರ್ಟ್ ಪ್ರಕಾರವೇ ಉತ್ತಮ ಗುಣಮಟ್ಟದ ಊಟವನ್ನು ನೀಡಲು ಸೂಕ್ತ ಕ್ರಮ ವಹಿಸಬೇಕೆಂದು ತಿಳಿಸಿದರು. ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಯವರು ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ ವಿದ್ಯಾರ್ಥಿನಿಲಯಗಳನ್ನು ಉತ್ತಮವಾಗಿ ನಿರ್ವಹಿಸುವ ಬಗ್ಗೆ ಪರಿಶೀಲನೆ ನಡೆಸಬೇಕೆಂದು ತಿಳಿಸಿದರು, ವಿದ್ಯಾರ್ಥಿನಿಲಯಗಳಲ್ಲಿ ವಾಸ್ತವ್ಯ ಮಾಡುವ ಉದ್ದೇಶವನ್ನು ಹೊಂದಲಾಗಿದ್ದು, ಈ ಬಗ್ಗೆ ಸೂಕ್ತ ಕ್ರಮ ವಹಿಸಬೇಕೆಂದು ಮತ್ತು ನಿಲಯ ಮೇಲ್ವಿಚಾರಕರ ಸಭೆಯನ್ನು ಕರೆಯಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ/ ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರಿಗೆ ತಿಳಿಸಿದರು.<br>ಅಂಬೇಡ್ಕರ್ ಅಭಿವೃದ್ದಿ ನಿಗಮ ಮತ್ತು ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ದಿ ನಿಗಮದವರು ಕೊಳವೆ ಬಾವಿಗಳನ್ನು ತ್ವರಿತವಾಗಿ ಕೊರೆಯಲು ಕ್ರಮ ವಹಿಸಬೇಕೆಂದು ಮತ್ತು ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಚೆಸ್ಕಾಂ ಅಧಿಕಾರಿಯವರ ಸಹಯೋಗದೊಂದಿಗೆ ಕ್ರಮ ವಹಿಸಬೇಕೆಂದು ಜಿಲ್ಲಾ ವ್ಯವಸ್ಥಾಪಕರುಗಳಿಗೆ ತಿಳಿಸಿದರು. | |
| | | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಎಂ.ಕೆ.ದ್ಯಾವಯ್ಯ) 29/06
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ